## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 215(258) |
| ಸದಸ್ಯರ ಹೆಸರು | : | ಶ್ರೀ ಸಿ.ಟಿ ರವಿ (ವಿಧಾನ ಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 09.12.2025 |
| ಉತ್ತರಿಸುವ ಸಚಿವರು | : | ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಏಕರೂಪ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸುವ ಅಗತ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ: ಬಂದಿದ್ದಲ್ಲಿ, ಈವರೆಗೆ ವೃಂದ ಮತ್ತು ನೇಮಕಾತಿ (ಸಿ & ಆರ್) ನಿಯಮಗಳನ್ನು ಅಳವಡಿಸಿಕೊಳ್ಳದೇ ಇರಲು ಕಾರಣಗಳೇನು; | ಸರ್ಕಾರದ ಆದೇಶ ಸಂಖ್ಯೆ: ನಅಇ 212 ನಯೋಸೇ 2023(ಇ), ದಿನಾಂಕ:07.11.2023 ರಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯವನ್ನು ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ ಎಂದು ಪದನಾಮೀಕರಿಸಲಾಗಿದೆ.<br>ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ, 1987 ಕ್ಕೆ ತಿದ್ದುಪಡಿ ತರಲು ಪ್ರಸ್ತಾಪಿಸಿರುವ ಕರಡು ವಿಧೇಯಕದಲ್ಲಿ ಏಕರೂಪದ ವೃಂದ ಮತ್ತು ನೇಮಕಾತಿ (Cadre & recruitment) ನಿಯಮಗಳನ್ನು ರಚಿಸುವ ಪ್ರಸ್ತಾವನೆ ಒಳಗೊಂಡಿರುತ್ತದೆ. ಸದರಿ ವಿಧೇಯಕವನ್ನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಯು ಪರಿಶೋಧಿಸಿರುತ್ತದೆ. ಸದರಿ ವಿಧೇಯಕವು ಪರಿಶೀಲನಾ ಹಂತದಲ್ಲಿರುತ್ತದೆ. |
| ಆ | ವೃಂದ ಮತ್ತು ನೇಮಕಾತಿ (ಸಿ & ಆರ್) ರಚಿಸುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಂಡಿದೆಯೇ; ಯಾವ ಕಾಲಮಿತಿಯೊಳಗೆ ವೃಂದ ಮತ್ತು ನೇಮಕಾತಿ (ಸಿ & ಆರ್) ನಿಯಮಗಳನ್ನು ರಚಿಸಲಾಗುವುದು; | |
| ಇ | ಪ್ರಸ್ತುತ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಅಗತ್ಯವಿರುವ ಸಿಬ್ಬಂದಿಗಳನ್ನು ಹೇಗೆ ನೇಮಕ ಮಾಡಿಕೊಳ್ಳಲಾಗುತ್ತದೆ? (ವಿವರ ನೀಡುವುದು) | ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987 ರ ಕಲಂ-12 ರನ್ವಯ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಸರ್ಕಾರದಿಂದ ಆಯುಕ್ತರನ್ನು ನೇಮಿಸಲಾಗುವುದು.<br>ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987ರ ಕಲಂ 52ರನ್ವಯ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಅಗತ್ಯವಾದ ಸಿಬ್ಬಂದಿಗಳನ್ನು ಸರ್ಕಾರದ ಅನುಮೋದನೆ ಪಡೆದು ನೇಮಿಸಿಕೊಳ್ಳಲು ಆಯಾ ಪ್ರಾಧಿಕಾರದ ಆಯುಕ್ತರು ಅಧಿಕಾರವನ್ನು ಹೊಂದಿರುತ್ತಾರೆ.<br>ಮೇಲ್ಕಂಡ ಕಾಯ್ದೆಯಲ್ಲಿ ಅವಕಾಶದಂತೆ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗುತ್ತದೆ. |

**ಸಂಖ್ಯೆ: ನಅಇ 368 ಬೆಂರೂಪ್ರಾ 2025 (ಇ-ಕಡತ)**

**(ಬಿ.ಎಸ್. ಸುರೇಶ)**

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು